## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರ್ ರವರು ನಿಯಮ-330 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:**ರಾಜ್ಯದ ಶೇಕಡಾ 70 ರಷ್ಟು ಜನರು ಗ್ರಾಮೀಣ ಭಾಗದಲ್ಲಿ ನೆಲೆಸಿದ್ದು, ಗ್ರಾಮೀಣ ಜನರಿಗೆ ಮುಂಚೂಣಿ ಕಾರ್ಯಾಲಯವಾಗಿ ಗ್ರಾಮ ಪಂಚಾಯತಿಯು ಕಾರ್ಯನಿರ್ವಹಿಸುತ್ತಿದ್ದು, ಸದರಿ ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕರ ಪ್ರತಿನಿಧಿಯಾಗಿ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರಿದ್ದಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರ 110-ಎ ಯಲ್ಲಿ ಪಂಚಾಯತ್ ಸದಸ್ಯರಿಗೆ ನಿಗದಿಪಡಿಸಲಾದ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಭಾಯಿಸುವ ಹೊಣೆಗಾರಿಕೆ ಅವರ ಮೇಲಿದ್ದು, ಗ್ರಾಮೀಣ ಭಾಗದಲ್ಲಿ ಜನಸಾಮಾನ್ಯರು ತಮ್ಮ ಹೆಚ್ಚಿನ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಗ್ರಾಮ ಪಂಚಾಯತಿಯ ಸದಸ್ಯರನ್ನು ಅವಲಂಬಿಸಿದ್ದಾರೆ.

ನಮ್ಮ ರಾಜ್ಯದಲ್ಲಿ ಗ್ರಾಮ ಪಂಚಾಯತ್ ಸದಸ್ಯರಿಗೆ ಗೌರವ ಧನ ಸೇರಿದಂತೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಬಹಳ ಕಡಿಮೆ ಇದೆ. ಪ್ರಸ್ತುತ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಅಧ್ಯಕ್ಷ-ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣಭತ್ಯೆ ಮತ್ತು ದಿನಭತ್ಯೆ) ನಿಯಮಗಳು 1994ರಂತೆ ಸದಸ್ಯರಿಗೆ ಕಿ.ಮೀ. ಕೇವಲ 40 ಪೈಸೆ ಇದ್ದು, ಇದು ಸದಸ್ಯರ ಮನೋಬಲವನ್ನೇ ಕುಗ್ಗಿಸುವಂತಿದೆ.

ರಾಜ್ಯ ಸರ್ಕಾರ ಈ ಕೂಡಲೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರ ಗ್ರಾಮ ಪಂಚಾಯತಿಗಳಿಗೆ ಪ್ರತೀ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡುತ್ತಿರುವ ಶಾಸನಬದ್ಧ ಅನುದಾನವನ್ನು ಹೆಚ್ಚಿಸಬೇಕು ಮತ್ತು ಗ್ರಾಮ ಪಂಚಾಯತಿಗಳ ಅದ್ಯಕ್ಷರು-ಉಪಾಧ್ಯಕ್ಷರುಗಳಿಗೆ ಮತ್ತು ಸದಸ್ಯರಿಗೆ ನೀಡುತ್ತಿರುವ ಗೌರವ ಧನ ಸೇರಿದಂತೆ ಇನ್ನಿತರೆ ಸೌಲಭ್ಯಗಳನ್ನು ಹೆಚ್ಚಳ ಮಾಡಲು ಕ್ರಮ ಕೈಗೊಳ್ಳಬೇಕು. ಒಟ್ಟಾರೆ ಗ್ರಾಮ ಪಂಚಾಯತ್ ಸದಸ್ಯರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು.

***

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 206 ರಲ್ಲಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಬಗ್ಗೆ ಉಪಬಂಧವಿದ್ದು, ಸರ್ಕಾರವು ಪ್ರತಿಯೊಂದು ಗ್ರಾಮ ಪಂಚಾಯತಿಗೆ ವಾರ್ಷಿಕವಾಗಿ ಅದು ಕಾಲಕಾಲಕ್ಕೆ ಅನುಸೂಚಿಸಬಹುದಾದಂತೆ ಅಂತಹ ಮೊಬಲಗಿನ, ಆದರೆ ಐದು ಲಕ್ಷ ರೂಪಾಯಿಗಳಿಗೆ ಕಡಿಮೆ ಇಲ್ಲದ ಅನುದಾನ ನೀಡತಕ್ಕದ್ದು ಮತ್ತು ನಿಧಿಯ ಲಭ್ಯತೆಗೆ ಒಳಪಟ್ಟು ಸರ್ಕಾರವು ರಾಜ್ಯ ಹಣಕಾಸು ಆಯೋಗವು ನಿರ್ಧರಿಸಬಹುದಾದಂತೆ ಪಂಚಾಯತ್‌ಗಳಿಗೆ ಅನುದಾನಗಳ ಅಂತಹ ಶೇಕಡಾವಾರನ್ನು ಹಂಚಿಕೆ ಮಾಡತಕ್ಕದ್ದು. ಅದರಲ್ಲಿ ಶೇಕಡಾ ಇಪ್ಪತ್ತು ಮುಕ್ತ (Untied) ಅನುದಾನಗಳಾಗಿರತಕ್ಕದ್ದು ಎಂದಿರುತ್ತದೆ.

ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಆರ್ಥಿಕವಾಗಿ ಸಧೃಢವಾಗಲು ರಾಜ್ಯ ಸರ್ಕಾರಗಳ ಹಣಕಾಸು ಆಯೋಗಗಳ ಶಿಫಾರಸ್ಸಿನ್ವಯ ಅನುದಾನ ನೀಡಲಾಗುತ್ತಿದೆ. ಪ್ರಸ್ತುತ ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ, ಗ್ರಾಮ ಪಂಚಾಯತಿಗಳಿಗೆ ವಾರ್ಷಿಕವಾಗಿ ಸರಾಸರಿ ಶಾಸನಬದ್ಧ ಅನುದಾನವಾಗಿ ರೂ:20.00 ಲಕ್ಷಗಳ ಅನುದಾನ ನೀಡಲಾಗುತ್ತಿದೆ. ಅದರಂತೆ 2024-25 ನೇ ಸಾಲಿಗೆ ರೂ. 1202.18 ಕೋಟಿಗಳ ಅನುದಾನ ನಿಗಧಿಪಡಿಸಲಾಗಿದ್ದು, ವಾರ್ಷಿಕವಾಗಿ 4 ತ್ರೈಮಾಸಿಕ ಕಂತುಗಳಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 267 ರನ್ವಯ ಪ್ರಸ್ತುತ 5 ನೇ ರಾಜ್ಯ ಹಣಕಾಸು ಆಯೋಗ ರಚಿತವಾಗಿದ್ದು, ಸದರಿ ಆಯೋಗವು ಜಿಲ್ಲಾ ಪಂಚಾಯತಿಗಳ, ತಾಲ್ಲೂಕು ಪಂಚಾಯತಿಗಳ ಮತ್ತು ಗ್ರಾಮ ಪಂಚಾಯತಿಗಳ ಹಣಕಾಸು ಪರಿಸ್ಥಿತಿ ಪರಾಮರ್ಶಿಸಲು ಮತ್ತು ಹಣಕಾಸು ಪರಿಸ್ಥಿತಿಯನ್ನು ಸುಧಾರಿಸಲು ಅವಶ್ಯಕವಾದ ಕ್ರಮಗಳನ್ನು ಕೈಗೊಳ್ಳಲು ಶಿಫಾರಸ್ಸು ಮಾಡಲು ತಿಳಿಸಲಾಗಿದೆ.

5ನೇ ರಾಜ್ಯ ಹಣಕಾಸು ಆಯೋಗವು ನೀಡುವ ಶಿಫಾರಸ್ಸಿನ ಆಧಾರದ ಮೇಲೆ ನಿಧಿಯ ಲಭ್ಯತೆಗೆ ಒಳಪಟ್ಟು ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಪ್ರತಿ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡುತ್ತಿರುವ ಶಾಸನಬದ್ಧ ಅನುದಾನವನ್ನು ಹೆಚ್ಚಳ ಮಾಡಲು ಪರಿಶೀಲಿಸಲಾಗುವುದು.

ರಾಜ್ಯದಲ್ಲಿ ಪ್ರಸ್ತುತ 5950 ಗ್ರಾಮ ಪಂಚಾಯತಿಗಳಿದ್ದು, ಈ ಗ್ರಾಮ ಪಂಚಾಯತಿಗಳಲ್ಲಿ ಅಧ್ಯಕ್ಷರು 5882, ಉಪಾಧ್ಯಕ್ಷರು 5881 ಮತ್ತು ಸದಸ್ಯರು 82,049 ಚುನಾಯಿತ ಪ್ರತಿನಿಧಿಗಳಿರುತ್ತಾರೆ.

ಗ್ರಾಮ ಪಂಚಾಯತಿಗಳ ಚುನಾಯಿತ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರಿಗೆ ಮಾಸಿಕ ಗೌರವ ಧನವನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗುತ್ತಿದ್ದು, ಈ ಗೌರವ ಧನದ ಮೊತ್ತವನ್ನು ಸರ್ಕಾರವು ಆಗಿಂದಾಗ್ಗೆ ಪರಿಷ್ಕರಿಸುತ್ತಿದೆ. ಈ ಹಿಂದೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ:03.05.2017ರಲ್ಲಿ ರಾಜ್ಯದ ಗ್ರಾಮ ಪಂಚಾಯತಿಯ ಅಧ್ಯಕ್ಷರಿಗೆ ರೂ.3000/-, ಉಪಾಧ್ಯಕ್ಷರಿಗೆ ರೂ.2000/- ಮತ್ತು ಸದಸ್ಯರಿಗೆ ರೂ.1000/- ಗಳನ್ನು ನಿಗಧಿಪಡಿಸಲಾಗಿತ್ತು.

ತದನಂತರ ಸರ್ಕಾರ ಆದೇಶ ಸಂಖ್ಯೆ:ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022ರಲ್ಲಿ ಸದರಿ ಗೌರವಧನದ ಮೊತ್ತವನ್ನು ಪರಿಷ್ಕರಿಸಲಾಗಿರುತ್ತದೆ. ಈ ಆದೇಶದನ್ವಯ ಮಾಸಿಕವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.6000/-, ಉಪಾಧ್ಯಕ್ಷರಿಗೆ ರೂ.4000/- ಮತ್ತು ಸದಸ್ಯರಿಗೆ ರೂ.2000/- ಗೌರವಧನವನ್ನು ಡಿಸೆಂಬರ್ 2022 ರಿಂದ ಅನ್ವಯವಾಗುವಂತೆ ಪಾವತಿಸಲು ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ: 23.01.2023 ರನ್ವಯ ಗ್ರಾಮ ಪಂಚಾಯತಿಯ ಚುನಾಯಿತ ಪ್ರತಿನಿಧಿಗೆ ರೂ.300/- ಉಪವೇಶನ ಶುಲ್ಕವನ್ನು ಪಾವತಿಸಲಾಗುತ್ತಿತ್ತು. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 12 ಜಿಪಸ 2025, ದಿನಾಂಕ: 16.01.2025 ರನ್ವಯ ಪ್ರಸ್ತುತ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ರೂ. 350/- ಗಳ ಉಪವೇಶನ ಶುಲ್ಕ ಪಾವತಿಸಲು ಆದೇಶಿಸಲಾಗಿದೆ.

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಗ್ರಾಮ ಪಂಚಾಯತಿಗಳ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರುಗಳು ಅವನ ಪ್ರಕಾರ್ಯಗಳನ್ನು ನೆರವೇರಿಸುವುದಕ್ಕಾಗಿ, ಗ್ರಾಮ ಪಂಚಾಯತಿ ಪರಿಮಿತಿ ಆಚೆ ಅವನು ಮಾಡಿದ ಪ್ರಯಾಣಕ್ಕಾಗಿ ಇತ್ತೀಚಿನ ಪ್ರಯಾಣ ದರದನ್ವಯ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಾವತಿಸಲಾಗುತ್ತಿದೆ.

**ಸಂಖ್ಯೆ: ಗ್ರಾಅಪ 231 ಗ್ರಾಪಂಅ 2025**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.